ವಿಷಯ:- ವಿಜಾಪುರದಲ್ಲಿ ಅಂಗನವಾಡಿ ಕೇಂದ್ರ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 547 (1234)

ಶ್ರೀ ಬಸವನಗೌಡ ರಾ.ಪಾಟೀಲ (ವಿಜಾಪುರ):- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ವಿಜಾಪುರ ನಗರಕ್ಕೆ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಸರಕಾರದವರು ಉದ್ದೇಶಿಸಿರುವರೇ ಹಾಗಿದ್ದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು.

ಶ್ರೀಮತಿ ವಿಮಲಬಾಯಿ ದೇಶ್‌ಮುಖ್ (ಮಹಿಳ ಮತ್ತು ಮಕ್ಕಳು ಕಲ್ಯಾಣ ರಾಜ್ಯ ಸಚಿವರರು):-

ಅ) ಹೌದು, ಬಿಜಾಪುರ ನಗರಕ್ಕೆ ಒಂದು ಸಮಗ್ರ ಬಾಲವಿಕಾಸ ಯೋಜನೆಯನ್ನು ಮಂಜೂರು ಮಾಡಲು ದಿನಾಂಕ 27-3-96ರಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಮಂಜೂರಾತಿ ಬಂದ ನಂತರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಬಿಜಾಪುರ ನಗರದಲ್ಲಿ ಅನುಷ್ಠಾನಗೊಳ್ಳಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆಯನ್ನು ಜನಸಂಖ್ಯೆಯ ಆಧಾರದ ಮೇಲೆ ನಿರ್ಧರಿಸಲಾಗುವುದು.

ವಿಷಯ:- ರಾಜ್ಯದಲ್ಲಿರುವ ಅಂಗನವಾಡಿ ಕೆಂದ್ರಗಳು ಸಂಖ್ಯೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 548 (854)

ಶ್ರೀ ಕೆ.ಜಯರಾಮ ಶೆಟ್ಟಿ (ಉಳ್ಳಾಲ):- ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

ಆ) ಸ್ವಂತ ಕಟ್ಟಡಗಳನ್ನು ಹೊಂದಿರುವ ಕೆಂದ್ರಗಳೆಷ್ಟು?

ಕಟ್ಟಡಗಳನ್ನು ಹೊಂದದೇ ಇರುವ ಕೇಂದ್ರಗಳೆಷ್ಟು?

ಇ) 1995-96ರಲ್ಲಿ 1996-97ರಲ್ಲಿ ಎಷ್ಟು ಕೇಂದ್ರಗಳನ್ನು ತೆರೆಯಲಾಗಿದೆ.

ಈ) ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಯಾವ ಯಾವ ಅರ್ಹತೆಗಳಿರಬೇಕು?

ಉ) ಉಳ್ಳಾಲದಲ್ಲಿ ವಿಧಾನ ಸಭೆ ಕ್ಷೇತ್ರದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ? ಕಳೆದ 2 ವರ್ಷಗಳಲ್ಲಿ ಎಷ್ಟು ಕೇಂದ್ರಗಳನ್ನು ತೆರೆಯಲಾಯಿತು. ಈ ಕ್ಷೇತ್ರದ ಒಟ್ಟು ಅಂಗನವಾಡಿ ಕೇಂದ್ರಗಳ ಅವಶ್ಯಕತೆ ಎಷ್ಟು?